ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಸ್ವೈಫೆಂಡರಿ ಪದವೀಧರರ ಸೇವೆಯನ್ನು ನಿವೃತ್ತಿ ಪಿಂಚಣಿಗೆ ಪರಿಗಣಿಸುವುದು

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) –

581 (508) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ನಿರುದ್ಯೋಗಿ ಪದವೀಧರರನ್ನು ಸ್ವೈಫೆಂಡರಿ ಮೂಲಕ ವಿವಿಧ ಇಲಾಖೆಗಳಲ್ಲಿ 1978 ರಲ್ಲಿ ನೇಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) 1988 ರಲ್ಲಿ ಸ್ವೈಫೆಂಡರಿ ಪದವೀಧರರಿಗೆ 50% ಮೀಸಲಾತಿ ಕೊಡುವುದಕ್ಕೆ ತೀರ್ಮಾನಿಸಿ ಇಲಾಖೆಗೆ ನೇಮಿಸಕೊಂಡಿರುವುದು ಸರ್ಕಾರದ ಗಮನದಲ್ಲಿದೆಯೇ;

(ಇ) ಸ್ವೈಫೆಂಡರಿ ಪದವೀಧರರು ಸುಮಾರು 12, 13 ವರ್ಷಗಳು ಮಿತ ವೇತನ ಪದವೀಧರರಾಗಿ ಸೇವೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಈ) ಸ್ವೈಫೆಂಡರಿ ಪದವೀಧರರು ಹಾಗೂ ದಿನಗೂಲಿ ನೌಕರರು ಅರ್ಹ ಸೇವೆಯನ್ನು ನಿವೃತ್ತಿ ಪಿಂಚಣಿಗೆ ಪರಿಗಣಿಸುವ ಸಂಬಂಧ ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ದಿನಾಂಕ : 02-09-2019ರಂದು ತೀರ್ಪು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ತೀರ್ಪಿನಲ್ಲಿ ಯಾವ ರೀತಿಯಲ್ಲಿ ನಿವೃತ್ತಿ ನೌಕರರ ಅರ್ಹ ಸೇವೆಯನ್ನು ಪರಿಗಣಿಸಿ ಪಿಂಚಣಿ ನೀಡಬೇಕೆಂದು ಆದೇಶಿಸಿರುತ್ತದೆ; (ವಿವರ ಒದಗಿಸುವುದು)

(ಊ) ಮಿತ ವೇತನದಲ್ಲಿ ನಿರ್ವಹಸಿರುವ ಸೇವೆಯನ್ನು ಪರಿಗಣಿಸಿ, ಪಿಂಚಣಿ ಸೌಲಭ್ಯ ನೀಡುವಂತೆ ಆದೇಶದಲ್ಲಿ ತಿಳಿಸಿದ್ದರೂ ಸಹ ಸರ್ಕಾರದಿಂದ ಯಾವುದೇ ಕ್ರಮ ಆಗದಿರುವುದಕ್ಕೆ ಕಾರಣವೇನು;

(ಋ) ಪ್ರಸ್ತುತ ಯಾವ ರೀತಿ ಅರ್ಹ ಸೇವೆಯನ್ನು ಪರಿಗಣಿಸಲಾಗಿದೆ; (ವಿವರ ಒದಗಿಸುವುದು)

(ಎ) ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಯಾವ ಕಾಲಮಿತಿಯೊಳಗೆ ಈ ನಿವೃತಿ ನೌಕರರಿಗೆ ನ್ಯಾಯ ದೊರಕಿಸಲಾಗುವುದು?